# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 987(1107)
ಸದಸ್ಯರ ಹೆಸರು : ಶ್ರೀ ಕೆ.ಪಿ.ನಂಜುಂಡಿ ವಿಶ್ವಕರ್ಮ
(ವಿಧಾನಸಭೆಯಿಂದ ಚುನಾಯಿತರಾದವರು
ಉತ್ತರಿಸಬೇಕಾದ ದಿನಾಂಕ : 15-12-2023
ಉತ್ತರಿಸುವ ಸಚಿವರು : ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

| ಕ್ರಸಂ | ಪ್ರಶ್ನೆ | ಉತ್ತರ |
| --- | --- | --- |
| ಅ) | ರಾಜ್ಯದ ಆಡಳಿತ ಕೇಂದ್ರವಾದ ವಿಧಾನಸೌಧ ಆವರಣದಲ್ಲಿ ಸ್ಥಾಪಿಸಿರುವ ಪ್ರತಿಮೆಗಳ ಸಂಖ್ಯೆ ಎಷ್ಟು; ಯಾರ ಯಾರ ಪ್ರತಿಮೆಗಳು ಸ್ಥಾಪನೆಗೊಂಡಿದೆ; | ವಿಧಾನಸೌಧ ಆವರಣದಲ್ಲಿ ಒಟ್ಟು 13 ಪ್ರತಿಮೆಗಳನ್ನು ಸ್ಥಾಪಿಸಲಾಗಿದ್ದು, ವಿವರಗಳು ಈ ಕೆಳಕಂಡಂತಿದೆ.<br>1. ಮಹಾತ್ಮ ಗಾಂಧಿ<br>2. ಪಂಡಿತ್ ಜವಾಹರ್ ಲಾಲ್ ನೆಹರು<br>3. ನಾಡಪ್ರಭು ಕೆಂಪೇಗೌಡ<br>4. ಜಗಜ್ಯೋತಿ ಶ್ರೀ ಬಸವಣ್ಣ<br>5. ಡಾ.ಬಿ.ಆರ್. ಅಂಬೇಡ್ಕರ್<br>6. ಎಸ್. ನಿಜಲಿಂಗಪ್ಪ<br>7. ಕೆ.ಸಿ. ರೆಡ್ಡಿ<br>8. ಸಂತ ಕನಕದಾಸರು<br>9. ಡಿ. ದೇವರಾಜು ಅರಸು<br>10. ಲಾಲ್ ಬಹುದ್ದೂರ್ ಶಾಸ್ತ್ರಿ<br>11. ನೇತಾಜಿ ಸುಭಾಷ್ ಚಂದ್ರ ಬೋಸ್<br>12. ಡಾ:ಬಾಬು ಜಗಜೀವನ್ ರಾಮ್<br>13. ಕೆಂಗಲ್ ಹನುಮಂತಯ್ಯ |
| ಆ) | ಕಳೆದ 50 ವರ್ಷಗಳಿಂದ ದೈವಗಳ ಸ್ವರೂಪಕ್ಕೆ ಮತ್ತು ರಾಜ್ಯದ ದೇವಾಲಯಗಳ ಸೃಷ್ಟಿಕರ್ತರಾದ ವಿಶ್ವಕರ್ಮ ಸಮಾಜದವರ ಭಗವಾನ್ ವಿಶ್ವಕರ್ಮ ಅಥವಾ ಅಮರಶಿಲ್ಪಿ ಜಕ್ಕಣಚಾರಿ ಪ್ರತಿಮೆಗಳನ್ನು ಸ್ಥಾಪಿಸುವ ಬಗ್ಗೆ ಕ್ರಮ ಕೈಗೊಳ್ಳದಿರಲು ಕಾರಣವೇನು; | ಸರ್ಕಾರದ ಸುತ್ತೋಲೆ ಸಂಖ್ಯೆ: ಕಸಂವಾಪ್ರ 564 ಕಸಧ 2012, ದಿನಾಂಕ:11.06.2012ರಲ್ಲಿ ಸರ್ಕಾರದ/ ಸಾರ್ವಜನಿಕ ಜಾಗದಲ್ಲಿ ಯಾವುದೇ ಸಂತರ/ಶರಣರ ಜನನಾಯಕರ, ಸ್ವಾತಂತ್ರ್ಯ ಹೋರಾಟಗಾರರ ಅಥವಾ ಗಣ್ಯವ್ಯಕ್ತಿಗಳ ಪ್ರತಿಮೆಗಳನ್ನು ಸ್ಥಾಪಿಸುವುದನ್ನು ನಿರ್ಬಂಧಿಸಲಾಗಿರುತ್ತದೆ. (ಅನುಬಂಧ-1) |
| ಇ) | ಈಗಲಾದರೂ ಭಗವಾನ್ ವಿಶ್ವಕರ್ಮ ಅಥವಾ ಅಮರಶಿಲ್ಪಿ ಜಕ್ಕಣಚಾರಿ ಪ್ರತಿಮೆಯನ್ನು ಸ್ಥಾಪಿಸುವ ಬಗ್ಗೆ ಕ್ರಮ ಕೈಗೊಂಡು ಕಾಯಕ ಸಮಾಜಕ್ಕೆ ಸರ್ಕಾರ ನ್ಯಾಯ ಒದಗಿಸುವುದೇ? | ಚಾಲ್ತಿ ನಿಯಮಗಳನ್ವಯ, ಅನುದಾನದ ಲಭ್ಯತೆಗೊಳಪಟ್ಟು ಪ್ರತಿಮೆಯನ್ನು ಸ್ಥಾಪಿಸುವ ಬಗ್ಗೆ ಪರಿಶೀಲಿಸಲಾಗುವುದು. |

ಸಂಖ್ಯೆ: ಕಸಂವಾ 51 ಕವಿಸ 2023

**(ಶಿವರಾಜ ಎಸ್.ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು.

ಕರ್ನಾಟಕ ಸರ್ಕಾರ

ಸಂಖ್ಯೆ: ಕಸಂವಾಪ್ರ 564 ಕಸಧ 2012

ಕರ್ನಾಟಕ ಸರ್ಕಾರ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ:11.6.2012

:: ಸುತ್ತೋಲೆ ::

ವಿಷಯ: ಗಣ್ಯ ವ್ಯಕ್ತಿಗಳ ಪ್ರತಿಮೆಗಳನ್ನು ಪ್ರತಿಷ್ಠಾಪಿಸುವ ಕುರಿತು ಮಾರ್ಗಸೂಚಿಗಳು.

ಸಂತರು, ಶರಣರು, ಸ್ವಾತಂತ್ರ್ಯ ಹೋರಾಟಗಾರರು, ಗಣ್ಯ ವ್ಯಕ್ತಿಗಳು ಮುಂತಾದವರು ದೇಶಕ್ಕಾಗಿ ಸಲ್ಲಿಸಿದ ಸೇವೆ, ತ್ಯಾಗ ಮನೋಭಾವಗಳನ್ನು ಸ್ಮರಿಸುವ ಉದ್ದೇಶದಿಂದ ಅಂತಹವರ ಪ್ರತಿಮೆಗಳನ್ನು ಸರ್ಕಾರಿ ಕಛೇರಿಗಳು, ಸಾರ್ವಜನಿಕ ಪ್ರದೇಶಗಳಲ್ಲಿ ಸ್ಥಾಪನೆ ಮಾಡಲಾಗುತ್ತಿದೆ, ಆದರೆ ಇಂತಹ ಪ್ರತಿಮೆಗಳನ್ನು ಸಮರ್ಪಕವಾಗಿ ನಿರ್ವಹಿಸದೇ ಇದ್ದು, ವಿರೂಪಗೊಂಡಿರುವುದು ಇನ್ನಿತರ ಅಹಿತಕರ ಘಟನೆಗಳು ಸಂಭವಿಸಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಈ ಪ್ರತಿಮೆಗಳ ಸ್ಥಾಪನೆಗೆ ಸ್ಪಷ್ಟವಾದ ಮಾರ್ಗಸೂಚಿ ಗಳಿಲ್ಲದಿರುವುದನ್ನು ಮನಗಂಡು ಯಾವುದೇ ಸರ್ಕಾರಿ ಜಾಗದಲ್ಲಿ ಗಣ್ಯ ವ್ಯಕ್ತಿಗಳ ಪ್ರತಿಮೆಗಳನ್ನು ಸ್ಥಾಪನೆ ಮಾಡುವುದು ಸೂಕ್ತವಲ್ಲವೆಂದು ಪರಿಗಣಿಸಿ ಗಣ್ಯವ್ಯಕ್ತಿಗಳ ಪ್ರತಿಮೆಗಳ ಸ್ಥಾಪನೆಗೆ ಸಂಬಂಧಿಸಿದಂತೆ ಕೆಳಗಿನ ಮಾರ್ಗಸೂಚಿಗಳನ್ನು ಹೊರಡಿಸಿದೆ.

(1) ಸರ್ಕಾರದ/ಸಾರ್ವಜನಿಕ ಜಾಗದಲ್ಲಿ ಯಾವುದೇ ಸಂತರ/ಶರಣರ, ಧನ ನಾಯಕರ, ಸ್ವಾತಂತ್ರ್ಯ ಹೋರಾಟಗಾರರ ಅಥವಾ ಗಣ್ಯ ವ್ಯಕ್ತಿಗಳ ಪ್ರತಿಮೆಗಳನ್ನು ಸ್ಥಾಪಿಸುವುದನ್ನು ನಿರ್ಬಂಧಿಸಿದೆ.

(2) ಪ್ರತಿಮೆ ಸ್ಥಾಪಿಸುವುದಕ್ಕೆ ಸಂಘ ಸಂಸ್ಥೆಗಳು ಮುಂದೆ ಬಂದಲ್ಲಿ ಪ್ರಾಥಮಿಕವಾಗಿ ಅಂತಹ ಸಂಘ ಸಂಸ್ಥೆಗಳು ತಮಗೆ ಸೇರಿದ್ದ ನಿವೇಶನದಲ್ಲಿ ಪ್ರತಿಮೆಯನ್ನು ನಿರ್ಮಿಸುವ ಹಾಗೂ ಅವುಗಳ ಭದ್ರತೆ ಮತ್ತು ಸಂರಕ್ಷಣೆಗೆ ಸಂಬಂಧಿಸಿದಂತೆ ಮುಚ್ಚಳಿಕೆ ನೀಡತಕ್ಕದ್ದು.

(3) ಮಂಜೂರಾತಿ ಪಡೆದು ಸ್ಥಾಪಿಸಲಾದ ಪ್ರತಿಮೆಗಳ ನಿರ್ವಹಣೆಯನ್ನು ಆಯಾ ಸಂಘ ಸಂಸ್ಥೆಗಳೇ ನಿರ್ವಹಿಸತಕ್ಕದ್ದು.

(4) ಪ್ರತಿಮೆ ಸ್ಥಾಪನೆಗೆ ಪ್ರತಿ ಪ್ರಕರಣವಾಗಿ ಸರ್ಕಾರದಿಂದ ನೀಡಲಾಗುವ ಗರಿಷ್ಠ ಅನುದಾನದ ಮೊತ್ತ ರೂ.10.00 ಲಕ್ಷವಾಗಿರುತ್ತದೆ

(ಹೆಚ್.ಪಿ.ರಾಮಚಂದ್ರರಾವ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಇಲಾಖೆ

ಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಕೆಂಗೇರಿ ಹೊರವಲಯ ಮುದ್ರಣಾಲಯ, ಬೆಂಗಳೂರು ಮುಂದಿನ ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಲು

ಪ್ರತಿ:

1) ಮಹಾಲೇಖಪಾಲರು (ಎ&ಇ) ಕರ್ನಾಟಕ, ಬೆಂಗಳೂರು.
2) ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು
3) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು
4) ಪೋಲೀಸ್ ಮಹಾನಿರ್ದೇಶಕರು, ನೃಪತುಂಗ ರಸ್ತೆ, ಬೆಂಗಳೂರು
5) ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು
6) ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು
7) ಪೋಲೀಸ್ ಆಯುಕ್ತರು, ಬೆಂಗಳೂರು ನಗರ, ಇನ್‌ಫ್ಯಾಂಟ್ರಿ ರಸ್ತೆ, ಬೆಂಗಳೂರು
8) ಎಲ್ಲಾ ಜಿಲ್ಲಾಧಿಕಾರಿಗಳು
9) ಎಲ್ಲಾ ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿಗಳು
10) ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
11) ಆಯುಕ್ತರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಭವನ, ಬೆಂಗಳೂರು
12) ನಿರ್ದೇಶಕರು, ವಾರ್ತಾ ಇಲಾಖೆ, ಬೆಂಗಳೂರು [ಪತ್ರಿಕಾ ಪ್ರಕಟಣೆಗಾಗಿ]
13) ಎಲ್ಲಾ ಮಾನ್ಯ ಸಚಿವರ ಆಪ್ತಕಾರ್ಯದರ್ಶಿಗಳು.
14) ಸರ್ಕಾರದ ಕಾರ್ಯದರ್ಶಿಗಳು/ಉಪಕಾರ್ಯದರ್ಶಿಗಳು, ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಇಲಾಖೆ, ವಿಧಾನಸೌಧ, ಬೆಂಗಳೂರು
15) ಪತ್ರಿಕಾ ಕೋಶ
16) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು